## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- **ಕೃಷಿಭಾಗ್ಯ ಯೋಜನೆಯಡಿ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರಿಗೆ ಅಂದಾಜು ಪತ್ರಿಕೆಗಳಿಗೆ ತಾಂತ್ರಿಕ ಮಂಜೂರಾತಿ ನೀಡಲು ಪೂರ್ಣ ಆರ್ಥಿಕ ಅಧಿಕಾರ ನೀಡುವ ಬಗ್ಗೆ.**

*******

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ: ಕೃಇ 08 ಕೃಯೋಕಾ 2014 ದಿ:22-07-2014.
2. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 31 ಕೃಯೋಕಾ 2007, ದಿನಾಂಕ:23-05-2007.
3. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರ ಪತ್ರ ಸಂಖ್ಯೆ: ಜಅಇ/ ಜಕೃನಿ (ಭೂಸಾಸಂ)/ಸಕೃನಿ/2014-15.ದಿನಾಂಕ:30-10-2014.

ಪ್ರಸ್ತಾವನೆ:

ಮೇಲೆ ಓದಲಾದ ಆದೇಶ (1)ರಲ್ಲಿ 2014-15ನೇ ಸಾಲಿನಲ್ಲಿ ರಾಜ್ಯದ ಮಳೆಯಾಶ್ರಿತ ಕೃಷಿಯನ್ನು ಜೀವನಾಧಾರಿತ ಕೃಷಿಯಿಂದ ಸುಸ್ಥಿರ ಕೃಷಿಯನ್ನಾಗಿ ರೂಪಾಂತರಿಸಲು ಸಮರ್ಪಕ ಮಳೆ ನೀರಿನ ನಿರ್ವಹಣೆಯನ್ನು ಮಾಡುವ ಸಲುವಾಗಿ **"ಕೃಷಿಭಾಗ್ಯ"** ಯೋಜನೆಯನ್ನು ಜಾರಿಗೊಳಿಸಿರುತ್ತದೆ. ಸದರಿ ಯೋಜನೆಯಲ್ಲಿ ಮಳೆಬಿದ್ದ ಸ್ಥಳದಲ್ಲೇ ತೇವಾಂಶವನ್ನು ಸಂರಕ್ಷಿಸಲು Compartment bunding, Tied Ridges, Conservation furrow, Graded bund, Zine conservation terrace, contour bund ಮುಂತಾದ ಕಾಮಗಾರಿಗಳನ್ನು ಮತ್ತು ಮಳೆ ನೀರನ್ನು ಸಂಗ್ರಹಿಸಿ ಬೆಳೆಗಳಿಗೆ ಉಪಯೋಗಿಸಲು ಕೃಷಿ ಹೊಂಡಗಳನ್ನು ಯೋಜಿಸಲಾಗಿರುತ್ತದೆ. ಸದರಿ ಯೋಜನೆಯನ್ನು ರಾಜ್ಯದ 23 ಜಿಲ್ಲೆಗಳ 107 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

ಮೇಲೆ ಓದಲಾದ ಆದೇಶ (2)ರಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯ ಭೂ ಸಾರ ಸಂರಕ್ಷಣಾ ಕಾಮಗಾರಿಗಳ ಅಂದಾಜು ಪತ್ರಿಕೆಗಳಿಗೆ ತಾಂತ್ರಿಕ ಮಂಜೂರಾತಿ ನೀಡುವ ಅಧಿಕಾರವನ್ನು ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳಿಗೆ ರೂ. ಐದು ಲಕ್ಷದವರೆಗೆ ಮತ್ತು ಉಪ ವಿಭಾಗೀಯ ಮಟ್ಟದ ಸಹಾಯಕ ಕೃಷಿ ನಿರ್ದೇಶಕರುಗಳಿಗೆ ರೂ.ಹತ್ತು ಸಾವಿರದವರೆಗೆ ಮಂಜೂರಾತಿ ನೀಡುವ ಆರ್ಥಿಕ ಅಧಿಕಾರವನ್ನು ನೀಡಲಾಗಿರುತ್ತದೆ.

ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರು ಮೇಲೆ ಓದಲಾದ ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆ (3)ರಲ್ಲಿ, ಕೃಷಿಭಾಗ್ಯ ಯೋಜನೆಯನ್ನು ಸದರಿ ಯೋಜನೆಯನ್ನು ಸಮರ್ಪಕವಾಗಿ ಹಾಗೂ ತ್ವರಿತವಾಗಿ ಅನುಷ್ಠಾನಗೊಳಿಸಲು ಮೇಲೆ ತಿಳಿಸಿದ ಕಾಮಗಾರಿಗಳ ಅಂಧಾಜು ಪತ್ರಿಕೆಗಳಿಗೆ ತಾಂತ್ರಿಕ ಮಂಜೂರಾತಿ ನೀಡಲು ಪೂರ್ಣ ಆರ್ಥಿಕ ಅಧಿಕಾರವನ್ನು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರಿಗೆ ನೀಡುವುದು ಅತ್ಯವಶ್ಯವಿರುವ ಕಾರಣ ಕೃಷಿಭಾಗ್ಯ ಯೋಜನೆಯಡಿ ನಿರ್ವಹಿಸಲಾಗುವ ಕಾಮಗಾರಿಗಳಿಗೆ ತಾಂತ್ರಿಕ ಮಂಜೂರಾತಿ ಮಾಡುವ ಸಲುವಾಗಿ ಪೂರ್ಣ ಆರ್ಥಿಕ ಅಧಿಕಾರವನ್ನು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳಿಗೆ ನೀಡುವಂತೆ ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 179 ಕೃಯೋಕಾ 2014,**
**ಬೆಂಗಳೂರು, ದಿನಾಂಕ: 13-01-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕೃಷಿಭಾಗ್ಯ ಯೋಜನೆಯನ್ನು **ಅನುಷ್ಠಾನಗೊಳಿಸಲು ಹಾಗೂ ಸದರಿ ಯೋಜನೆಯಡಿಯಲ್ಲಿ ಕೈಗೊಳ್ಳುವ ಎಲ್ಲಾ ಭೂಸಾರ ಸಂರಕ್ಷಣಾ ಕಾಮಗಾರಿಗಳ ಅಂದಾಜು ಪತ್ರಿಕೆಗಳಿಗೆ ತಾಂತ್ರಿಕ ಮಂಜೂರಾತಿ ನೀಡುವ ಪೂರ್ಣ ಆರ್ಥಿಕ ಅಧಿಕಾರವನ್ನು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳಿಗೆ ನೀಡಿ ಆದೇಶಿಸಿದೆ.**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜ್ಯೋತಿ.ಆರ್. ಜೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ) ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ಆಯುಕ್ತರು/ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
6. ಆಯುಕ್ತರು , ರೇಷ್ಮೆ ಇಲಾಖೆ, ಬೆಂಗಳೂರು.
7. ಆಯುಕ್ತರು / ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
8. ನಿದೇಶಕರು, ಖಜಾನೆ ಇಲಾಖೆ, ಬೆಂಗಳೂರು.
9. ರಾಜ್ಯದ ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರುಗಳಿಗೆ.( ಜಲಾನಯನ ಅಭಿವೃದ್ಧಿ ಇಲಾಖೆ ನಿರ್ದೇಶಕರ ಮೂಲಕ)
9. ಸರ್ಕಾರದ ಉಪ ಕಾರ್ಯದರ್ಶಿ-1 ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ -4).
12. ತಾಂತ್ರಿಕಾಧಿಕಾರಿ ಕೃಷಿ ಯೋಜನೆ ಎ- ಬಿ ಶಾಖೆ.
13. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಮಾಹಿತಿಗಾಗಿ ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ-1ರವರ ಆಪ್ತ ಸಹಾಯಕರು, ಕೃಷಿ ಇಲಾಖೆ, ಬೆಂಗಳೂರು.